ಬಿಜಾಪುರ ಜಿಲ್ಲೆಯನ್ನು ತೋಟಗಾರಿಕಾ ಜಿಲ್ಲೆಯನ್ನಾಗಿ ಘೋಷಿಸಿರುವುದು :

459 (5027) ಶ್ರೀ ಅಪ್ಪಸಾಹೇಬ್ ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) : ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ಕೃಷಿ ಮತ್ತು ತೋಟಗಾರಿಕಾ ಬೆಳೆಗಳ ಉತ್ತೇಜನಕ್ಕಾಗಿ ಹನಿ ನೀರಾವರಿಗೆ ನೀಡುತ್ತಿರುವ ಸಬ್ಸಿಡಿ ಪ್ರಮಾಣವೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು);

ಆ) ಬಿಜಾಪುರ ಜಿಲ್ಲೆಗೆ ನಿಗದಿ ಮಾಡಿರುವ ಸಬ್ಸಿಡಿ ಹಣ ಕಡಿಮೆ ನೀಡುತ್ತಿರಲು ಕಾರಣವೇನು;

ಇ) ಬಿಜಾಪುರ ಜಿಲ್ಲೆಗೆ ರೈತರಿಗೆ ಹನಿ ನೀರಾವರಿಗಾಗಿ ಬರಬೇಕಾಗಿರುವ ಸಬ್ಸಿಡಿ ಹಣವೆಷ್ಟು; ಯಾವಾಗ ಬಿಡುಗಡೆ ಮಾಡಲಾಗುವುದು;

ಈ) ದ್ರಾಕ್ಷಿ, ದಾಳಿಂಬೆ, ನಿಂಬೆ, ಬೋರೆ, ಪಪ್ಪಾಯಿ ಮತ್ತು ಮಾವಿನ ಹಣ್ಣುಗಳನ್ನು ರಾಜ್ಯದಲ್ಲಿಯೇ ಅತಿ ಹೆಚ್ಚು ಬೆಳೆಯುತ್ತಿರುವುದರಿಂದ ಬಿಜಾಪುರ ಜಿಲ್ಲೆಯನ್ನು ತೋಟಗಾರಿಕಾ ಜಿಲ್ಲೆ ಎಂದು ಘೋಷಿಸಲು ಸರ್ಕಾರ ಯೋಚಿಸಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಘೋಷಿಸಲಾಗುವುದು?

ಶ್ರೀ ಆರ್. ಶ್ರೀನಿವಾಸ (ತೋಟಗಾರಿಕೆ ಸಚಿವರು) :

ಅ) ರಾಜ್ಯ ಸರ್ಕಾರವು ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಅಳವಡಿಸಲು ಸಹಾಯಧನವನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶೇಕಡಾ 50ರ ಪ್ರಮಾಣದಲ್ಲಿ ಮತ್ತು ಬಿಜಾಪುರ, ಕೋಲಾರ ಜಿಲ್ಲೆಗಳಲ್ಲಿ ಹಾಗೂ ಎಲ್ಲಾ ಜಿಲ್ಲೆಗಳಲ್ಲಿ ಗಂಗಾಕಲ್ಯಾಣ ಫಲಾನುಭವಿಗಳಿಗೆ ಶೇಕಡಾ 100ರ ಪ್ರಮಾಣದಲ್ಲಿ ನೀಡಲಾಗುತ್ತಿದೆ.

ಆ) ಈ ಯೋಜನೆಯು ರಾಜ್ಯಾದ್ಯಂತ ಜಾರಿಯಲ್ಲಿದೆ. ಬಿಜಾಪುರ ಜಿಲ್ಲೆಯಲ್ಲಿ ಬೇಡಿಕೆ ಹೆಚ್ಚು. ಅನುದಾನದ ಲಭ್ಯತೆಯನ್ನು ಆಧರಿಸಿ ಸಬ್ಸಿಡಿ ಹಣ ನೀಡಲಾಗುತ್ತಿದೆ.

ಇ) ಬಿಜಾಪುರ ಜಿಲ್ಲೆಯ ರೈತರಿಗೆ ಹನಿ ನೀರಾವರಿಗಾಗಿ ರೂ.576 ಲಕ್ಷ ಸಹಾಯಧನ ನೀಡಬೇಕಾಗಿರುತ್ತದೆ. ಈ ಯೋಜನೆಯನ್ನು ಪ್ರಸ್ತುತ ಸಾಲಿನಿಂದ ಜಿಲ್ಲಾ ವಲಯದಡಿ ಅನುಷ್ಠಾನಗೊಳಿಸಲಾಗುವುದು. 2005–06ನೇ ಸಾಲಿಗೆ ಒಟ್ಟು ರೂ.70 ಲಕ್ಷಗಳನ್ನು ನಿಗದಿ ಮಾಡಲಾಗಿದ್ದು, ಬಿಜಾಪುರ ಜಿಲ್ಲಾ ಪಂಚಾಯತ್‌ನಿಂದ ಹಣ ಬಿಡುಗಡೆ ಮಾಡಬೇಕಾಗಿದೆ.

ಈ) ಇಲ್ಲ. ಯಾವುದೇ ಒಂದು ಜಿಲ್ಲೆಯನ್ನು ತೋಟಗಾರಿಕೆ ಜಿಲ್ಲೆಯೆಂದು ಘೋಷಿಸುವ ಪರಿಪಾಠವಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.